**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

ಸಿ.ಸಿ.**1242/2023**

ಪಿರ್ಯಾದುದಾರರು ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ಧ-

ಆರೋಪಿ/ತರು ಃ ಮಂಜುನಾಥ

-ಃ ದೋಷಾರೋಪಣೆಃ-

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

ಮಂಜು ಬಿನ್ ಗೋವಿಂದರಾಜು, 28 ವರ್ಷ,
ವಾಸಃಯಲುಗೆರೆ ಗ್ರಾಮ, ದುಗ್ಲಾಪುರ, ತರೀಕೆರೆ ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿಃ05.12.2022 ರಂದು ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ಸಿಡುಕನಹಳ್ಳಿ ಗ್ರಾಮದ ಸರ್ವೆ ನಂ.51, 52, 53 ರಲ್ಲಿ ಚಾಸಾ-7 ರವರಿಗೆ ಸೇರಿದ 4 ಎಕರೆ ಜಮೀನಿಗೆ ಆರೋಪಿಯಾದ ನೀವು ಅತೀಕ್ರಮ ಪ್ರವೇಶ ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**447** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡಂತೆ, ಆರೋಪಿಯಾದ ನೀವು ಜೆ ಸಿ ಬಿ ಚಲಾಯಿಸಿ ಟ್ರಾಕ್ಟರ್ ನ್ನು ಬಳಸಿಕೊಂಡು ಕೃತ್ಯ ನಡೆದ ಪ್ರದೇಶದಿಂದ 600 ಮೆಟ್ರಿಕ್ ಟನ್ ಮಣ್ಣನ್ನು ತೆಗೆದು ಕಳ್ಳತನ ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**379** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ24.09.2024

Sd/-

(ವೈದ್ಯ ಶ್ರೀಕಾಂತ್)

ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?

ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)
ದಿನಾಂಕಃ24.09.2024

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿತರ ಸಹಿಃ